C-23545

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2020-21ನೇ ಸಾಲಿಗೆ ಸೇವಾನಿರತವಾಗಿ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜನೆಗೊಂಡಿರುವ ವೈದ್ಯರುಗಳ ಪ್ರತಿ ನಿಯೋಜನಾ ಸೌಲಭ್ಯ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:1)** ಸರ್ಕಾರದ ಆದೇಶ ಸಂಖ್ಯೆ:ಆಕುಕ 325 ಹೆಚ್ ಎಸ್ ಹೆಚ್ 2020, ದಿನಾಂಕ:30.06.2020.

**2)** ಸರ್ಕಾರದ ಆದೇಶ ಸಂಖ್ಯೆ:ಆಕುಕ 406 ಹೆಚ್ ಎಸ್ ಹೆಚ್ 2020, ದಿನಾಂಕ:18.08.2020.

**3)** ನಿದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಪತ್ರ ಸಂಖ್ಯೆ:ಬಿಇಸಿ/ಐಪಿಜಿ/03/2020-21, ದಿನಾಂಕ:19-10-2020.

Office of the Commissioner Health & FWS, B'lore No. 2136 Dt. 25/11/20

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿನ ಆದೇಶಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ನಡೆಸಿದ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡು ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರದ ಕೌನ್ಸಿಲಿಂಗ್ ಮೂಲಕ ಸೇವಾನಿರತ ಸ್ನಾತಕೋತ್ತರ ವ್ಯಾಸಂಗಕ್ಕಾಗಿ ಕಾಲೇಜು ಮತ್ತು ವಿಷಯವನ್ನು ಆಯ್ಕೆ ಮಾಡಿಕೊಂಡಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅನುಬಂಧದಲ್ಲಿ ತೋರಿಸಲಾದ ವೈದ್ಯಾಧಿಕಾರಿಗಳನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಡಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 61ರ ಪರಿಶಿಷ್ಟ 2ಎ ಕಂಡಿಕೆ-1ರನ್ವಯ 2020-21ನೇ ಸಾಲಿನಲ್ಲಿ ಸೇವಾನಿರತವಾಗಿ ಪ್ರಥಮ ಬಾರಿಗೆ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜಿಸಲಾಗಿತ್ತು. ನಿಯೋಜಿತ ವೈದ್ಯಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಪರಿಶಿಷ್ಟ 2ಎ ರಲ್ಲಿ ತಿಳಿಸಿದಂತೆ ನಮೂನೆ-19ರ ಬಂಧ ಪತ್ರವನ್ನು ಸಲ್ಲಿಸುವ ಜೊತೆಗೆ ಪೆನಾಲ್ಟಿ ಬಾಂಡ್‌ನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

1. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಪರಿಶಿಷ್ಟ 2ಎ ರಲ್ಲಿ ತಿಳಿಸಿದಂತೆ ನಮೂನೆ 19 ರಲ್ಲಿ ಕೆಳಕಂಡ ಅಂಶಗಳನ್ನು ಒಳಗೊಂಡ ಒಂದು ಬಂಧಪತ್ರವನ್ನು ಹಾಗೂ ಸೇವಾನಿರತ ಕೋಟಾದ ವೈದ್ಯರುಗಳಿಗೆ ಅನ್ವಯವಾಗುವ Karnataka Conduct Of Entrance Test For Selection And Admission To Post Graduate Medical And Dental Degree And Diploma Courses Rules 2006 ಮತ್ತು ತಿದ್ದುಪಡಿ ನಿಯಮ 2011 ರಲ್ಲಿನ ಅಂಶಗಳನ್ನೊಳಗೊಂಡ ಪೆನಾಲ್ಟಿ ಬಾಂಡ್ ಸಲ್ಲಿಸತಕ್ಕದ್ದು.

2. ಈ ಸ್ನಾತಕೋತ್ತರ ವ್ಯಾಸಂಗದ ನಂತರ ಕನಿಷ್ಟ 10 ವರ್ಷಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದಾಗಿ ಬಾಂಡ್ ಮೇಲೆ ಸಹಿಮಾಡಿ ಸಲ್ಲಿಸುವುದು ಹಾಗೂ ಈ ಅವಧಿಯಲ್ಲಿ ಸ್ವಯಂ ನಿವೃತ್ತಿಗಾಗಿ ಅಥವಾ ಅನ್ಯ ಇಲಾಖೆ/ಮಂಡಳಿ/ನಿಗಮಗಳಿಗೆ ವೈದ್ಯಕೀಯ ಶಿಕ್ಷಣ ಇಲಾಖೆ ಸೇರಿದಂತೆ ನಿಯೋಜನೆ ಮೇಲೆ ಕಳುಹಿಸುವಂತೆ ಕೋರಿಕೆ ಸಲ್ಲಿಸಲು ಅವಕಾಶವಿರುವುದಿಲ್ಲ.

3. ವ್ಯಾಸಂಗದ ನಂತರ ಅವರ ವಿದ್ಯಾರ್ಹತೆಗೆ ತಕ್ಕಂತೆ ಹೊಸ ಹುದ್ದೆ ಸೃಜಿಸಬೇಕೆಂದು ಯಾವುದೇ ಮನವಿ/ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ. ಆಕುಕ ಇಲಾಖೆಯ ವ್ಯಾಪ್ತಿಯಲ್ಲಿ ಲಭ್ಯವಿರುವ ಪದನಾಮ ಹುದ್ದೆಯಡಿ ಕಾರ್ಯನಿರ್ವಹಿಸತಕ್ಕದ್ದು.

4. ಸ್ನಾತಕೋತ್ತರ ವ್ಯಾಸಂಗಕ್ಕೆ ಪ್ರವೇಶ ಪಡೆದವರು ನಿಯಮಗಳ ಅನುಸಾರ ಬಾಂಡ್ ಮತ್ತಿತರ ದಾಖಲೆಗಳನ್ನು ಒದಗಿಸಿದ ನಂತರ ವೇತನ/ರಜೆ ಪಡೆಯಲು ಆದೇಶ ಹೊರಡಿಸಲಾಗುವುದು.

CAO No 683 Date 26/11

ಪ್ರಸ್ತುತ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಸೇವಾನಿರತ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜಿತರಾದ ಸದರಿ 20 ವೈದ್ಯಾಧಿಕಾರಿಗಳು ಸದರಿ ಸಂಸ್ಥೆಗಳಲ್ಲಿ ವ್ಯಾಸಂಗಕ್ಕೆ ಹಾಜರಾಗಿರುವ ಬಗ್ಗೆ ಸಿ.ಟಿ.ಸಿ, ನಮೂನೆ-19 ಮತ್ತು 19ಎ ರಲ್ಲಿ ಕರಾರು ಬಂಧಪತ್ರ ಹಾಗೂ ಪೆನಾಲ್ಟಿ ಬಾಂಡ್ ಸಲ್ಲಿಸಿರುವುದರಿಂದ ಈ ಸೇವಾನಿರತ ವೈದ್ಯರುಗಳಿಗೆ ಸ್ನಾತಕೋತ್ತರ ವ್ಯಾಸಂಗದ ಅವಧಿಗೆ ಪ್ರತಿನಿಯೋಜನಾ ಸೌಲಭ್ಯವನ್ನು ಮಂಜೂರು ಮಾಡುವಂತೆ ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಅನುಬಂಧದಲ್ಲಿನ ಸದರಿ ವೈದ್ಯಾಧಿಕಾರಿಗಳು, ವ್ಯಾಸಂಗವನ್ನು ಮೊಟಕುಗೊಳಿಸಿದ್ದಲ್ಲಿ ಬಂಧ ಪತ್ರ ಷರತ್ತಿನಂತೆ ಅಂದಿನಿಂದ ಸದರಿ ಪ್ರತಿನಿಯೋಜನಾ ಸೌಲಭ್ಯವನ್ನು ಸ್ಥಗಿತಗೊಳಿಸುವ ಷರತ್ತಿಗೆ ಒಳಪಡಿಸಿ ವ್ಯಾಸಂಗದ ಅವಧಿಗೆ ಪ್ರತಿನಿಯೋಜನಾ ಸೌಲಭ್ಯಗಳನ್ನು ಮಂಜೂರು ಮಾಡಲು ಸರ್ಕಾರ ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 577 ಹೆಚ್ಎಸ್ಹೆಚ್ 2020.**

**ಬೆಂಗಳೂರು, ದಿನಾಂಕ:18-11-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ನಮೂದಿಸಲಾದ 20 ವೈದ್ಯಾಧಿಕಾರಿಗಳು ನಿಯೋಜಿತ ಸಂಸ್ಥೆಯಲ್ಲಿ ವ್ಯಾಸಂಗಕ್ಕೆ ಹಾಜರಾದ ದಿನಾಂಕದಿಂದ ವ್ಯಾಸಂಗವನ್ನು ಮುಂದುವರೆಸಿರುವ ಬಗ್ಗೆ ಸಂಬಂಧಿಸಿದ ಸಂಸ್ಥೆಯಿಂದ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಖಚಿತಪಡಿಸಿಕೊಂಡು ಸದರಿ ವೈದ್ಯಾಧಿಕಾರಿಗಳು ವ್ಯಾಸಂಗದಲ್ಲಿ ಮುಂದುವರೆಯುವ ತನಕ ಮಾತ್ರ ಪ್ರತಿ ನಿಯೋಜನಾ ಸೌಲಭ್ಯವನ್ನು ಮಂಜೂರು ಮಾಡುವಂತೆ ಹಾಗೂ ಒಂದೊಮ್ಮೆ ಸದರಿ ವೈದ್ಯಾಧಿಕಾರಿಗಳು ವ್ಯಾಸಂಗವನ್ನು ಮೊಟಕುಗೊಳಿಸಿದ್ದಲ್ಲಿ ಅಂದಿನಿಂದ ಸದರಿ ಸೌಲಭ್ಯವನ್ನು ಸ್ಥಗಿತಗೊಳಿಸುವ ಷರತ್ತಿಗೆ ಒಳಪಡಿಸಿ ವ್ಯಾಸಂಗದ ಅವಧಿಗೆ ಮಾತ್ರ ಪ್ರತಿನಿಯೋಜನಾ ಸೌಲಭ್ಯಗಳನ್ನು ಮಂಜೂರು ಮಾಡಿದೆ.

ಸೇವಾನಿರತ ಸ್ನಾತಕೋತ್ತರ ವ್ಯಾಸಂಗಕ್ಕೆ ಆಯ್ಕೆಯಾದ 20 ವೈದ್ಯಾಧಿಕಾರಿಗಳು ವ್ಯಾಸಂಗಕ್ಕೆ ಹಾಜರಾದ ದಿನಾಂಕದಿಂದ ಪ್ರತಿನಿಯೋಜನಾ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ ಹಾಗೂ ಅವರುಗಳ ವ್ಯಾಸಂಗದ ಅವಧಿಗೆ ವೇತನ ಮತ್ತು ಇತರೆ ಭತ್ಯೆಗಳನ್ನು ಬಟವಾಡೆ ಮಾಡುವ ಅಧಿಕಾರವನ್ನು ಈ ಕೆಳಕಂಡಂತೆ ನೀಡಿ ಆದೇಶಿಸಿದೆ.

| ಕ್ರ ಸಂ | ವಿವರ | ವೇತನ ಮತ್ತು ಇತರೆ ಭತ್ಯೆ (ಪ್ರತಿ ನಿಯೋಜನಾ ಸೌಲಭ್ಯ ಬಟವಾಡೆ ಮಾಡುವ ಅಧಿಕಾರಿ) |
|---|---|---|
| 1. | ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸೇವಾನಿರತ ವೈದ್ಯರುಗಳಿಗೆ | ನಿರ್ದೇಶಕರು, ಆರೋಗ್ಯ ಮತ್ತು ಕು.ಕ ಸೇವೆಗಳು, ಬೆಂಗಳೂರು. |
| 2. | ಸ್ವಾಯತ್ತ ಸಂಸ್ಥೆ/ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸೇವಾನಿರತ ವೈದ್ಯರುಗಳಿಗೆ | ಜಿಲ್ಲಾ ಶಸ್ತ್ರ ಚಿಕಿತ್ಸಕರು ಒಂದು ವೇಳೆ ಜಿಲ್ಲಾ ಶಸ್ತ್ರ ಚಿಕಿತ್ಸಕರ ಹುದ್ದೆಯು ಯಾವುದೇ ಕಾರಣದಿಂದ ಖಾಲಿಯಿದ್ದಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಆಕುಕ 34 ಹೆಚ್ ಎಸ್ ಹೆಚ್ 2012 ದಿನಾಂಕ:18-01-2012ರನ್ವಯ ಪ್ರತಿ ನಿಯೋಜನಾ ಸೌಲಭ್ಯ ಬಟವಾಡೆ ಮಾಡುವ ಅಧಿಕಾರವನ್ನು ಆಯಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ನೀಡಲಾಗಿದೆ. |